सत्यमेव जयते

**" ELECTION URGENT "**

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್ ಹ್ಯಾಂ ರಸ್ತೆ. ಬೆಂಗಳೂರು-52.

**ಸಂಖ್ಯೆ: ರಾಚುಆ.30.ಇಯುಬಿ.2018, ದಿನಾಂಕ: 09-08-2018**

## ಪತ್ರಿಕಾ ಪ್ರಕಟಣೆ

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶ ಸಂಖ್ಯೆ: ರಾಚುಆ:30:ಇಯುಬಿ:2018, ದಿನಾಂಕ: 02.08.2018 ರಂದು ರಾಜ್ಯದ 105 (29 ನಗರಸಭೆಗಳು, 53 ಪುರಸಭೆಗಳು ಹಾಗೂ 23 ಪಟ್ಟಣ ಪಂಚಾಯಿತಿಗಳು) ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆ ನಡೆಸಲು ಆದೇಶಿಸಲಾಗಿತ್ತು. ಸದರಿ ವೇಳಾಪಟ್ಟಿಯಂತೆ ಮತಗಳ ಎಣಿಕೆಯನ್ನು ದಿನಾಂಕ: 01.09.2018 (ಶನಿವಾರ) ರಂದು ನಿಗಧಿಪಡಿಸಲಾಗಿತ್ತು.

ಆಯೋಗವು ಮೈಸೂರು, ಶಿವಮೊಗ್ಗ ಮತ್ತು ತುಮಕೂರು ಮಾಹಾನಗರ ಪಾಲಿಕೆಗಳಿಗೆ ದಿನಾಂಕ: 09.08.2018 ರಂದು ಚುನಾವಣೆಯನ್ನು ಘೋಷಿಸಿರುವ ಹಿನ್ನೆಲೆಯಲ್ಲಿ, ಮಹಾನಗರ ಪಾಲಿಕೆಗಳೂ ಒಳಗೊಂಡಂತೆ ಎಲ್ಲಾ 108 ನಗರ ಸ್ಥಳೀಯ ಸಂಸ್ಥೆಗಳ ಮತಗಳ ಎಣಿಕೆಯನ್ನು ಏಕಕಾಲದಲ್ಲಿ ನಡೆಸುವ ಉದ್ದೇಶದಿಂದ, **ಮತಗಳ ಎಣಿಕೆಯನ್ನು ದಿನಾಂಕ: 01.09.2018 (ಶನಿವಾರ)ರ ಬದಲಿಗೆ ದಿನಾಂಕ: 03.09.2018 (ಸೋಮವಾರ) ರಂದು ನಡೆಸಲು ಆದೇಶಿಸಿದೆ.** ಚುನಾವಣೆ ನೀತಿ ಸಂಹಿತೆ ದಿನಾಂಕ: 03.09.2018ರ ವರೆಗೆ ಜಾರಿಯಲ್ಲಿರುತ್ತದೆ. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.

ಈ ಬಗ್ಗೆ ಶ್ರವಣ ಮತ್ತು ದೃಶ್ಯ ಮಾದ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಿ ಸಹಕರಿಸುವಂತೆ ಕೋರಲಾಗಿದೆ.

ಅರ್ಚನ ಎಂ.ಎಸ್.
(ಅರ್ಚನ ಎಂ.ಎಸ್) 9/8/2018
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:**

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು- - - - - -ದಿನಪತ್ರಿಕೆ/ ದೂರ ದರ್ಶನ ಪ್ರಸಾರ ವಾಹಿನಿಗಳಿಗೆ ಕಳುಹಿಸಿ, ಸುದ್ದಿ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.

**ಪ್ರತಿಗಳು:**

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ.
3. ಜಿಲ್ಲಾಧಿಕಾರಿಗಳು ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ತುಮಕೂರು, ಮೈಸೂರು, ಚಾಮರಾಜನಗರ, ದಕ್ಷಿಣ ಕನ್ನಡ, ಉಡುಪಿ, ಹಾಸನ, ಮಂಡ್ಯ, ಕೊಡಗು, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ, ಹಾವೇರಿ, ಉತ್ತರ ಕನ್ನಡ, ಕಲಬುರಗಿ, ಕೊಪ್ಪಳ, ಬಳ್ಳಾರಿ, ರಾಯಚೂರು, ಬೀದರ್ ಮತ್ತು ಯಾದಗಿರಿ ಜಿಲ್ಲೆ.